Online Newspaper Clipping Service
**Dated, Thursday, 04rd May– 2017**

**Pg.No.03**

THE TIMES OF INDIA

# CET concludes with physics and chemistry papers

TIMES NEWS NETWORK

**Bengaluru:** The Common Entrance Test(CET) 2017 concluded on Wednesday, with over one lakh students appearing for physics and chemistry papers.

Many parents were, however, upset about the distance their children had to travel to reach the exam centres. "I don't understand why students cannot be allotted centres close to their colleges. My son studies in a North Bengaluru PU college, but had to travel all the way to the other side of the city to write the test," said V Mamatha, who accompanied her son to a test centre in Jayanagar.

**Mistake in physics paper?**

Although easier than previous years, G Sridhar, founder, Deeksha PU College, said that there were two errors were noted in one version of the physics paper. "In question 17 of version 681483 there was no correct option, and question 37 was a bit ambiguous, requiring students to think a lot before answering," he added.

ಪ್ರತಿಭಾ ಪ್ರದರ್ಶನ

ದೇವರಾಜ ಅರಸು ನರ್ಸಿಂಗ್ ಕಾಲೇಜಿನ ಕ್ರೀಡಾಕೂಟ ಉದ್ಘಾಟಿಸಿದ ಉಪಕುಲಪತಿ ಡಾ.ರಘುವೀರ್

# ಪ್ರತಿಭಾ ಪ್ರದರ್ಶನಕ್ಕೆ ಪಠ್ಯೇತರ ಚಟುವಟಿಕೆಗಳು ಅಗತ್ಯ

• **ಕನ್ನಡಪ್ರಭ ವಾರ್ತೆ** ಕೋಲಾರ -2

ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಿದಾಗ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದು ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದ ಉಪಕುಲಪತಿ ಡಾ.ಸಿ.ವಿ.ರಘುವೀರ್ ಅಭಿಪ್ರಾಯಪಟ್ಟರು.

ನಗರದ ದೇವರಾಜ ಅರಸು ವಿದ್ಯಾಸಂಸ್ಥೆಯಲ್ಲಿ ನರ್ಸಿಂಗ್ ಕಾಲೇಜಿನ ವತಿಯಿಂದ ಬುಧವಾರ ಆರಂಭವಾದ ರಾಜ್ಯಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿರುವ ಸೂರ್ಯ ಮತ್ತು ಜೋಷ್ 2017ನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಕ್ರೀಡೆಯೂ ಅಗತ್ಯ:** ವಿದ್ಯಾರ್ಥಿಗಳು ಸಾಮಾನ್ಯವಾಗಿ ಪಠ್ಯ ಚಟುವಟಿಕೆಗಳಲ್ಲಿ ಉತ್ತಮ ಫಲಿತಾಂಶ ಪಡೆಯುತ್ತಾರೆ. ಆದರೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಸಿಗುವ ಲಾಭಗಳ ಬಗ್ಗೆ ಅರಿವು ಇರುವುದಿಲ್ಲ. ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾದ ಅಗತ್ಯವಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ನರ್ಸಿಂಗ್ ವಿಭಾಗ ರಾಜ್ಯದಲ್ಲಿ ತನ್ನದೆ ಆದ ಪ್ರಮುಖ್ಯತೆಯನ್ನು ಪಡೆದುಕೊಂಡಿದೆ. ಹೊರರಾಜ್ಯಗಳಿಂದ ಅನೇಕ ವಿದ್ಯಾರ್ಥಿಗಳು ಬಂದು ಇಲ್ಲಿ ವ್ಯಾಸಂಗ ಮಾಡುತ್ತಿದ್ದೀರಿ. ತಮ್ಮ ಅಮೂಲ್ಯವಾದ ಸಮಯವನ್ನು ವ್ಯರ್ಥ ಮಾಡದೆ ವೃತ್ತಿ ಜೀವನದ ಮೂಲಕ ಬದುಕು ಕಟ್ಟಿಕೊಳ್ಳುವ ಕಡೆ ಗಮನ ಹರಿಸಿ ಎಂದು ಸಲಹೆ ನೀಡಿದರು.



ಸೂರ್ಯ ಮತ್ತು ಜೋಷ್ ಕಾರ್ಯಕ್ರಮವನ್ನು ಉಪಕುಲಪತಿ ಡಾ.ಸಿ.ವಿ.ರಘುವೀರ್ ಉದ್ಘಾಟಿಸಿದರು.

### ಪಠ್ಯೇತರಕ್ಕೂ ಒತ್ತು

- ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಯೂ ಮುಖ್ಯ
- ಕ್ರೀಡೆ, ಸಂಸ್ಕೃತಿ ಬೆಳೆಸಲು ವಿದ್ಯಾರ್ಥಿಗಳ ಸಹಕಾರ ಅಗತ್ಯ
- ವಿದ್ಯಾರ್ಥಿಗಳು ವೃತ್ತಿ ಕೌಶಲ ತರಬೇತಿ ಪಡೆಯಲಿ

**ಸಂಸ್ಕೃತಿ, ಕ್ರೀಡೆ ಉಳಿಸಿ:** ರಾಜ್ಯದ ವಿವಿಧ ಭಾಗಗಳಲ್ಲಿ ಒಂದೊಂದು ರೀತಿಯ ಸಂಸ್ಕೃತಿ, ಕ್ರೀಡೆ, ಪರಿಸರವಿರುತ್ತದೆ. ಅಲ್ಲಿನ ವಾತಾವರಣಕ್ಕೆ ಹೊಂದಿಕೊಂಡು ಜೀವನ ನಡೆಸುವ ಜನರೂ ಇದ್ದಾರೆ. ಸಾಂಸ್ಕೃತಿಕ ಚಟುವಟಿಕೆ, ಕ್ರೀಡೆಗಳು ಮರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ವಿದ್ಯಾ ಸಂಸ್ಥೆಗಳ ಮೇಲಿದೆ. ಇದಕ್ಕೆ ವಿದ್ಯಾರ್ಥಿಗಳು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ತರಬೇತಿ ನರ್ಸಿಂಗ್ ಸಂಸ್ಥೆಯ ಕಾರ್ಯದರ್ಶಿ ಪ್ರೊ.ಗಿರಿಜಾಂಭಾದೇವಿ ಮಾತನಾಡಿ, ಅನೇಕ ಸಮಸ್ಯೆಗಳ ನಡುವೆಯೂ ನರ್ಸ್‌ಗಳು ಉತ್ತಮ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ. ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ 48 ಸಾವಿರ ನರ್ಸಿಂಗ್ ವಿದ್ಯಾರ್ಥಿಗಳು ಮತ್ತು 14 ಸಾವಿರ ತರಬೇತಿ ಪಡೆಯುತ್ತಿರುವ ನರ್ಸಿಂಗ್ ವಿದ್ಯಾರ್ಥಿಗಳು ಇದ್ದಾರೆ. ರಾಜ್ಯದ ಲ್ಲಿನ ಪ್ರತಿಷ್ಠಿತ ಕಾಲೇಜುಗಳಲ್ಲಿ ವೃತ್ತಿ ಕೌಶಲ ತರಬೇತಿ ಕಾರ್ಯಾಗಾರ ನಡೆಸುತ್ತಿದ್ದು, ಇದರ ಪ್ರಯೋಜನ ಪಡೆದುಕೊಳ್ಳಲು ಮುಂದಾಗಬೇಕು ಎಂದು ಅವರು ತಿಳಿಸಿದರು.

ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ಡಾ.ಜಿ.ವಿಜಯಲಕ್ಷ್ಮೀ, ಪ್ರಾಧ್ಯಾಪಕರಾದ ಡಾ.ರಾಧ, ಡಾ.ಎಟಿಎಸ್ ಗಿರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# 'ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಿ'

## ಉಪ ಕುಲಪತಿ ಡಾ.ಸಿ.ವಿ.ರಘುವೀರ್ ಅಭಿಪ್ರಾಯ



ಕೋಲಾರ: 'ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಿದಾಗ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯ' ಎಂದು ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದ ಉಪ ಕುಲಪತಿ ಡಾ.ಸಿ.ವಿ.ರಘುವೀರ್ ಅಭಿಪ್ರಾಯಪಟ್ಟರು.

ನಗರದ ದೇವರಾಜ ಅರಸು ವಿದ್ಯಾ ಸಂಸ್ಥೆಯಲ್ಲಿ ನರ್ಸಿಂಗ್ ಕಾಲೇಜಿನ ವತಿಯಿಂದ ಬುಧವಾರ ಆರಂಭವಾದ ರಾಜ್ಯಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿರುವ ಸೂರ್ಯ ಮತ್ತು ಜೋಶ್"?? 2017ನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ವಿದ್ಯಾರ್ಥಿಗಳು ಸಾಮಾನ್ಯವಾಗಿ ಪಠ್ಯ ಚಟುವಟಿಕೆಗಳಲ್ಲಿ ಉತ್ತಮ ಫಲಿತಾಂಶ ಪಡೆಯುತ್ತಾರೆ. ಆದರೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಸಿಗುವ ಲಾಭಗಳ ಬಗ್ಗೆ ಅರಿವು ಇರುವುದಿಲ್ಲ. ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾದ ಅಗತ್ಯವಿದೆ' ಎಂದು ಹೇಳಿದರು.

'ಇತ್ತೀಚಿನ ದಿನಗಳಲ್ಲಿ ನರ್ಸಿಂಗ್ ವಿಭಾಗ ರಾಜ್ಯದಲ್ಲಿ ತನ್ನದೆ ಆದ ಪ್ರಮುಖ್ಯತೆಯನ್ನು ಪಡೆದುಕೊಂಡಿದೆ. ಹೊರರಾಜ್ಯಗಳಿಂದ ಅನೇಕ ವಿದ್ಯಾರ್ಥಿಗಳು ಬಂದು ಪದವಿ ವ್ಯಾಸಂಗ ಮಾಡುತ್ತಿದ್ದೀರಿ. ತಮ್ಮ ಅಮೂಲ್ಯವಾದ ಸಮಯವನ್ನು ವ್ಯರ್ಥ ಮಾಡದೆ ವೃತ್ತಿ ಜೀವನದ ಮೂಲಕ ಬದುಕು ಕಟ್ಟಿಕೊಳ್ಳುವ ಕಡೆ ಗಮನ ಹರಿಸಿ' ಎಂದು ಸಲಹೆ ನೀಡಿದರು.

'ಬಡ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕು ಎಂಬ ಉದ್ದೇಶದಿಂದ ಆರ್.ಎಲ್.ಜಾಲಪ್ಪ ಅವರು ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿದ್ದಾರೆ. ಪ್ರತಿಯೊಬ್ಬರು ಸಂಸ್ಥೆಯ ಅನುಕೂಲ ಪಡೆದು ಉತ್ತಮ ಪ್ರಜೆಗಳಾಗಿ ಬೆಳೆಯಬೇಕು' ಎಂದು ಕರೆ ನೀಡಿದರು.

'ರಾಜ್ಯದ ವಿವಿಧ ಭಾಗಗಳಲ್ಲಿ ಒಂದೊಂದು ರೀತಿಯ ಸಾಂಸ್ಕೃತಿ, ಕ್ರೀಡೆ, ಪರಿಸರವಿರುತ್ತದೆ. ಅಲ್ಲಿನ ವಾತಾವರಣಕ್ಕೆ ಹೊಂದಿಕೊಂಡು ಜೀವನ ನಡೆಸುವ ಜನರು ಇದ್ದಾರೆ. ಸಾಂಸ್ಕೃತಿ, ಕ್ರೀಡೆಗಳು ಮರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ವಿದ್ಯಾ ಸಂಸ್ಥೆಗಳ ಮೇಲಿದ್ದು, ಇದಕ್ಕೆ ವಿದ್ಯಾರ್ಥಿಗಳು ಸಹಕಾರ ನೀಡಬೇಕು' ಎಂದು ಮನವಿ ಮಾಡಿದರು.

ತರಬೇತಿ ನರ್ಸಿಂಗ್ ಸಂಸ್ಥೆಯ ಕಾರ್ಯದರ್ಶಿ ಪ್ಲೋರಿಬಾಂಧ ದೇವಿ ಮಾತನಾಡಿ, 'ಅನೇಕ ಸಮಸ್ಯೆಗಳ ನಡುವೆಯೂ ನರ್ಸ್‌ಗಳು ಉತ್ತಮ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ' ಎಂದರು.

ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ 48 ಸಾವಿರ ನರ್ಸಿಂಗ್ ವಿದ್ಯಾರ್ಥಿಗಳು ಮತ್ತು 14 ಸಾವಿರ ತರಬೇತಿ ಪಡೆಯುತ್ತಿರುವ ನರ್ಸಿಂಗ್ ವಿದ್ಯಾರ್ಥಿಗಳು ಇದ್ದಾರೆ. ರಾಜ್ಯದಲ್ಲಿನ ಪ್ರತಿಷ್ಠಿತ ಕಾಲೇಜುಗಳಲ್ಲಿ ವೃತ್ತಿ ಕೌಶಲ ತರಬೇತಿ ಕಾರ್ಯಾಗಾರಗಳನ್ನು ನಡೆಸುತ್ತಿದ್ದು, ಇದರ ಪ್ರಯೋಜನ ಪಡೆದುಕೊಳ್ಳಲು ಮುಂದಾಗಬೇಕು' ಎಂದು ತಿಳಿಸಿದರು.

ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ಡಾ.ಜಿ.ವಿಜಯಲಕ್ಷ್ಮೀ, ಪ್ರಾಧ್ಯಾಪಕರಾದ ಡಾ.ರಾಧ, ಡಾ.ಸುನಿತಾ, ಡಾ.ಎಟಿಎಸ್ ಗಿರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.